ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು

ಸ್ಪೆಷಲ್ ಕೇಸ್ ನಂಃ 204/2017

(ಫ್ರಾಸಾ-6 ಚಾಸಾ-15)
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು
ದಿಃ 10.11.2025

| | | |
|---|---|---|
| ಸಾಕ್ಷಿದಾರರ ಹೆಸರು | - | ವೈ ನಾಗರಾಜು |
| ತಂದೆಯ ಹೆಸರು | - | ಯಲ್ಲಪ್ಪ |
| ವಯಸ್ಸು | - | 67 ವರ್ಷ, |
| ಉದ್ಯೋಗ | - | ನಿವೃತ್ತ ಡಿವೈಎಸ್‌ಪಿ |
| ವಾಸ | - | ಬೆಂಗಳೂರು |

ಮುಖ್ಯ ವಿಚಾರಣೆಃ ಮಾನ್ಯ ವಿಶೇಷ ಸರ್ಕಾರಿ ಅಭಿಯೋಜಕರಿಂದಃ

ನಾನು ದಿಃ01.08.2016 ರಿಂದ ದಿಃ08.03.2018 ರವರೆಗೆ ದೊಡ್ಡಬಳ್ಳಾಪುರ ಉಪವಿಭಾಗದ ಡಿವೈಎಸ್ಪಿ ಆಗಿ ಕಾರ್ಯನಿರ್ವಹಿಸುತ್ತಿದ್ದೆನು. ರಾಜಾನುಕುಂಟೆ ಪೋಲಿಸ್ ಠಾಣೆ ದೊಡ್ಡಬಳ್ಳಾಪುರ ಉಪವಿಭಾಗದಲ್ಲಿ ಬರುತ್ತಿತ್ತು.

2. ದಿಃ01.08.2016 ರಂದು ಈ ಪ್ರಕರಣದ ಮುಂದಿನ ತನಿಖೆಯನ್ನು ಕಡತದೊಂದಿಗೆ ಚಾಸಾ-14 ಇವರಿಂದ ಎಸ್ ಪಿ, ಬೆಂಗಳೂರು, ಇವರ ಆದೇಶದ ಮೇರೆಗೆ ವಹಿಸಿಕೊಂಡು ಕಡತವನ್ನು ಪರಿಶೀಲಿಸಿರುತ್ತೇನೆ. ಸದರಿ ಆದೇಶವನ್ನು ನೋಡಿ ಗುರುತಿಸಿದ್ದು ನಿಪಿ-5 ಎಂದು ಸಾಕ್ಷಿ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

3. ದಿಃ05.08.2016 ರಂದು ಚಾಸಾ-2 ರವರ ಹೇಳಿಕೆ ಪಡೆದಿರುತ್ತೇನೆ. ದಿಃ08.08.2016 ರಂದು ಚಾಸಾ-3 ರಿಂದ 5 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ದಿಃ10.08.2016 ರಂದು ಚಾಸಾ-1 ಮತ್ತು 2 ರವರ ಎಂ ಎಲ್ ಸಿ ಕೋರಿ ವೈದ್ಯರು, ಯಲಹಂಕ ಸಾರ್ವಜನಿಕ ಆಸ್ಪತ್ರೆಗೆ ಮನವಿ ಸಲ್ಲಿಸಿರುತ್ತೇನೆ. ದಿಃ16.08.2016 ರಂದು ಚಾಸಾ-1 ಮತ್ತು 2 ರವರ ಗಾಯದ ಎಂ ಎಲ್ ಸಿ ಯನ್ನು ಚಾಸಾ-10 ರವರಿಂದ

ಪಡೆದಿರುತ್ತೇನೆ. ಸಾಕ್ಷಿ ಸದರಿ ಎಂ ಎಲ್ ಸಿ ದೃಡೀಕೃತ ನಕಲನ್ನು ನೋಡಿ ಗುರುತಿಸಿದ್ದು ನಿಪಿ-6 ಎಂದು ಸಾಕ್ಷಿ ಸಹಿಯನ್ನು ನಿಪಿ-6(ಎ) ಎಂದು ಗುರುತಿಸಲಾಯಿತು.

4. ದಿಃ09.09.2016 ರಂದು ಚಾಸಾ-1 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ-8 ರವರಿಂದ ನಿಪಿ-4 ರಂತೆ ಪಡೆದಿರುತ್ತೇನೆ. ಸಾಕ್ಷಿ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ದಿಃ10.09.2016 ರಂದು ಆರೋಪಿತರು ಮಾನ್ಯ ನ್ಯಾಯಾಲಯದಿಂದ ನೀರಿಕ್ಷಣಾ ಜಾಮೀನು ತೆಗೆದುಕೊಂಡು ನನ್ನ ಮುಂದೆ ಹಾಜರುಪಡಿಸಿದ್ದು ಅವರನ್ನು ವಿಚಾರಣೆ ಮಾಡಿ ದಸ್ತಗಿರಿ ಕ್ರಮ ಅನುಸರಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ.

9. ದಿಃ16.09.2016 ರಂದು ಚಾಸಾ-1 ಮತ್ತು ಆರೋಪಿತರ ಜಾತಿಯ ವರದಿಯನ್ನು ಚಾಸಾ-11 ರವರಿಂದ ಸ್ವೀಕರಿಸಿರುತ್ತೇನೆ. ನೋಡಿ ಗುರುತಿಸಿದ್ದು ನಿಪಿ-7 ಎಂದು ಸಾಕ್ಷಿ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ದಿಃ04.10.2016 ರಂದು ಚಾಸಾ-2 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ-8 ರವರಿಂದ ನಿಪಿ-3 ರಂತೆ ಪಡೆದಿರುತ್ತೇನೆ. ಸಾಕ್ಷಿ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಅದೇ ದಿನ ತನಿಖೆ ಪೂರ್ಣಗೊಳಿಸಿ ಆರೋಪಿತರ ವಿರುದ್ದ ದೋಷರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸಬಲ್ಲೆ. ಸಾಕ್ಷಿ 2 ಮತ್ತು 5 ನೇ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ (1, 3 ಮತ್ತು 4 ನೇ ಆರೋಪಿತರು ಗೈರು ಹಾಜರಾಗಿದ್ದು ವಿನಾಯಿತಿಗೆ ಆರೋಪಿ ಪರ ವಕೀಲರು ಅರ್ಜಿ ಸಲ್ಲಿಸಿದ್ದು ಗುರುತಿಸುವಿಕೆಗಾಗಿ ತಕರಾರು ಇಲ್ಲ ಎಂದು ನಿವೇದಿಸಿರುತ್ತಾರೆ).

**<u>ಪಾಟೀ ಸವಾಲುಃ 1 ರಿಂದ 3, 5 ನೇ ಆರೋಪಿತರ ಪರ ಶ್ರೀ ಎಸ್ ಪಿ ವಕೀಲರಿಂದಃ</u>**

10. ಕಡತ ಸ್ವೀಕರಿಸಿದ ನಂತರ ನಾನು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿರುತ್ತೇನೆ. ಚಾಸಾ-2 ರಿಂದ 7 ಇವರು ಚಾಸಾ-1 ರವರ ಸ್ನೇಹಿತರು ಎಂದರೆ ನನಗೆ ಗೊತ್ತಿಲ್ಲ. ತನಿಖಾ

ಕಾಲದಲ್ಲಿ ಈ ಪ್ರಕರಣಕ್ಕೆ ಅನುಕೂಲವಾಗುವಂತೆ ನಾನು ಗಾಯದ ಪ್ರಮಾಣ ಪತ್ರಗಳನ್ನು ಹಾಗೂ ಎಂ ಎಲ್ ಸಿ ಅನ್ನು ಸುಳ್ಳು ಸೃಷ್ಟಿ ಮಾಡಿಸಿ ಪಡೆದಿರುತ್ತೇನೆ ಎಂದರೆ ಸರಿಯಲ್ಲ. ನಾನು ತನಿಖಾ ಕಾಲದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆಯದೇ ಅವುಗಳನ್ನು ಸುಳ್ಳು ಸೃಷ್ಟಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಕಡತವನ್ನು ಸರಿಯಾಗಿ ಪರಿಶೀಲಿಸದೇ ಹಾಗೂ ಸರಿಯಾಗಿ ತನಿಖೆ ಮಾಡದೇ ನಿರಪರಾಧಿಗಳಾದ ಆರೋಪಿತರ ವಿರುದ್ಧ ಸುಳ್ಳು ದಾಖಲಾತಿಗಳನ್ನು ಹಾಗೂ ಹೇಳಿಕೆಗಳ ಆಧಾರದ ಮೇಲೆ ಚಾಸಾ-1 ರವರಿಗೆ ಸಹಾಯ ಮಾಡಲು ಸುಳ್ಳು ದೋಷರೋಪಣೆ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಹಾಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರದೇ ಇದ್ದರೂ ಸಹ ಠಾಣೆಯ ಅಂಕಿಅಂಶಗಳಿಗೋಸ್ಕರ ಸುಳ್ಳು ತನಿಖೆ ಮಾಡಿ ಸುಳ್ಳು ದೋಷರೋಪಣೆ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ 4 ನೇ ಆರೋಪಿ ಪರ ಶ್ರೀಮತಿ ಬಿ ಯು ವಕೀಲರಿಂದಃ</u>**

4 ನೇ ಆರೋಪಿ ಪರ ವಕೀಲರು ತಮ್ಮ ಹಿರಿಯ ವಕೀಲರು ಈ ದಿನ ನ್ಯಾಯಾಲಯಕ್ಕೆ ಹಾಜರಾಗಲು ಸಾಧ್ಯವಾಗದೇ ಇರುವುದರಿಂದ ಪಾಟೀ ಸವಾಲಿಗೆ ಕಾಲಾವಕೋಶ ಕೋರಿದ್ದು ಸೂಕ್ತ ಕಾರಣ ಇಲ್ಲದೇ ಇರುವುದರಿಂದ 4 ನೇ ಆರೋಪಿಯ ಪರವಾಗಿ ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರುವಿಚಾರಣೆಃ ಇಲ್ಲ</u>**

(ಸಾಕ್ಷಿ ಹೇಳಿದಂತೆ ಹೇಳಿಕೆಯನ್ನು ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿ ಓದಿ ಹೇಳಿದ್ದು ಸಾಕ್ಷಿ ಸರಿ ಇರುವುದಾಗಿ ಒಪ್ಪಿರುತ್ತಾರೆ ಎಂದು ದೃಡೀಕರಿಸುತ್ತೇನೆ)

ಓ ಹೇ ಸಾ ಸ ಸಹಿ ಮಾಡಿದ್ದಾರೆ,

(ಕೆ. ಗುರುಪ್ರಸಾದ್)
ಎರಡನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು